ಸರಕಾರ ಗೆಜಿಟ್ಟು

ದಿಂದ ಫಾಯಿಷ್ ಆದ್ದು.

ಬೆಂಗಳೂರು, ಶನಿವಾರ, ನವೆಂಬರ್ ತಾ|| 15, ಸ್ಯ 1884.

ಗಮನ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ

ಇಂಡ್ಯಗವರ್ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್ಗೀರುವಗೈರೇರಿಂದ ಕೊಡೋಕ್ಕಾದ ಇಸ್ತಿಹಾರ್‌ನಾಮೆಗಳು.

ಫಿನ್ಯಾನ್ಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡ್ಯನಲ್ಲಿ ಬಡ್ಡಿ ಸಲ್ಲತಕ್ಕ ಬಗ್ಗೆ, ಷರಾ ಬರೆಯಲ್ಪಡಬಹುದಾದಂತಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡ್ಯನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡ್ಯನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ, ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಷೇಸ್‌ಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಷೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡಿರ್ಸ,
ಕಾಂಪ್ಟ್ರೋಲರ್.

ಬೆಂಗಳೂರು ಡಿಸ್ಟ್ರಿಕ್ಟ್.

ಸೆಂಟ್ರಲ್ ಜೈಲ್.

ಇಸ್ತಿಹಾರ್‌ನಾಮಾ.

ತಾರೀಖು 4ನೇ ನವೆಂಬರ್ 1884.

ಇದರಿಂದ ಪ್ರಕಟಿಸಲ್ಪಡುವದೇನಂದರೆ,—ಬೆಂಗಳೂರು ಸೆಂಟ್ರಲ್ ಜೈಲ್‌ನಲ್ಲಿಯೂ, ಡಿಸ್ಟ್ರಿಕ್ಟು ಲಾಕಪ್ಪಿನಲ್ಲಿಯೂ, ಖೈದು ಮಾಡಲ್ಪಟ್ಟಿರುವ ಖೈದಿಗಳ ಉಪಯೋಗದ ಬಗ್ಗೆ ಬೇಕಾದ ಆಹಾರ ಪದಾರ್ಥಗಳು ವಗೈರೇ ದರೋಬಸ್ತು ಜಿನಸಿಗಳನ್ನೂ ಕಂಟ್ರಾಕ್ಟು ಮೂಲಕ ಸರಬರಾಯಿ ಮಾಡುವ ಬಗ್ಗೆ ಕೊಡಲ್ಪಡುವ ಬಂದು ಮಾಡಲ್ಪಟ್ಟ ದರಖಾಸ್ತುಗಳನ್ನು ಸ್ಯ 1884ನೇ ಇಸನಿ ಡಿಸಂಬರ್ 1ನೇ ತಾರೀಖಿನ ವರಿಗೆ ಸೆಂಟ್ರಲ್ ಜೈಲ್ ಸೂಪರ್‌ಟೆಂಡೆಂಟರವರು ತೆಗದುಕೊಳ್ಳುವರು.